# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ

E-mail : kannadapostnews@gmail.com / ಕನ್ನಡ post

Price: ₹1

Vol.No.02 | Issue. 25 | Pages. 2 | Date: 21-12-2025, SUNDAY

RNI NO: KARKAN/2024/89601

Kannada Daily

ಸಂಪುಟ : 02 – ಸಂಚಿಕೆ : 25 – ಪುಟಗಳು : 2 21-12-2025 ಭಾನುವಾರ

Ph: 8762954248

ದರ : ₹1


# ಜನ ಸ್ಪಂದನದಲ್ಲಿ 1069 ಅರ್ಜಿಗಳ ವಿಲೇವಾರಿ

## ಹೊಸದಾಗಿ ಬಂದ 135 ಅರ್ಜಿಗಳ ತ್ವರಿತ ಕ್ರಮಕ್ಕೆ ಜಿಲ್ಲಾಧಿಕಾರಿ ಲತಾಕುಮಾರಿ ಸೂಚನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ : ಜಿಲ್ಲಾ ಉಸ್ತುವಾರಿ ಸಚಿವರು ನಡೆಸಿದ ಜನ ಸ್ಪಂದನ ಕಾರ್ಯಕ್ರಮದಲ್ಲಿ ಸ್ವೀಕಾರವಾಗಿರುವ 1069 ಅರ್ಜಿಗಳನ್ನು ವಿಲೇವಾರಿ ಮಾಡಿರುವ ಕುರಿತು ವರದಿ ನೀಡುವುದರ ಜೊತೆಗೆ ಇಂದು ಸ್ವೀಕಾರ ಮಾಡಿರುವ 135 ಅರ್ಜಿಗಳ ವಿಲೇವಾರಿಗೆ ಸೂಕ್ತ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಲತಾಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಜನ ಸ್ಪಂದನ ಸಭೆಯಲ್ಲಿ ಅಹವಾಲು ಸ್ವೀಕಾರ ಮಾಡಿ ಮಾತನಾಡಿದ ಅವರು ಸಾರ್ವಜನಿಕರ ಸ್ವಂತ ಜಮೀನು ಒತ್ತುವರಿ ಆಗಿದ್ದಲ್ಲಿ ನ್ಯಾಯಾಲಯದ ನಿರ್ದೇಶನವಿದ್ದರೆ ಮಾತ್ರ ಬಿಡಿಸಲು ಅವಕಾಶ ಇರುತ್ತದೆ ಎಂದು ತಿಳಿಸಿದರು.

ಕಳೆದ 20 ವರ್ಷದಿಂದ ಪಡಿತರ ಕಾರ್ಡ್ ಹೊಂದಿದ್ದು, ಆದಾಯ ಹೆಚ್ಚಳವಾಗಿದೆ ಎಂದು ಕಂಪ್ಯೂಟರ್‌ನಲ್ಲಿ ತೋರಿಸುತ್ತಿರುವುದರಿಂದ 5 ವರ್ಷದಿಂದ ಪಡಿತರ ಕಾರ್ಡ್ ರದ್ದಾಗಿರುವುದನ್ನು ಸರಿಪಡಿಸಲು ಜಂಟಿ ನಿರ್ದೇಶಕರಿಗೆ ಸೂಚಿಸಿದರು.

ಅರಕಲಗೂಡು ತಾಲ್ಲೂಕಿನ ಮಾದಿಹಳ್ಳಿಯಲ್ಲಿ ಏತನೀರಾವರಿಗೆ ಭೂಸ್ವಾಧೀನವಾಗಿದ್ದು, ಪರಿಹಾರ ಕೋರಿ ಬಂದ ಮನವಿಗೆ ಖುದ್ದು ತಹಸೀಲ್ದಾರ್ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿದರು.

ಕಟ್ಟಾಯ ಗ್ರಾಮದಲ್ಲಿ ಸ್ಮಶಾನ ಜಾಗ ಒತ್ತುವರಿ ತೆರವುಗೊಳಿಸಲು, ವಸತಿ ಯೋಜನೆಯಡಿ ಮಂಜೂರಾದ ಮನೆಗೆ ಅಂತಿಮ ಬಿಲ್ ಹಣ ಪಾವತಿ ಮಾಡುವಂತೆ ಸೂಚಿಸಿದರಲ್ಲದೆ, ಸರ್ಕಾರಿ ಜಾಗದಲ್ಲಿ ಅನಧಿಕೃತವಾಗಿ ಶೇಡ್ ಹಾಕಿರುವುದನ್ನು ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಲು ನಿರ್ದೇಶನ ನೀಡಿದರು.

ಬೊಮ್ಮನಹಳ್ಳಿ ಏತನೀರಾವರಿ ಯೋಜನೆಗೆ ಭೂಸ್ವಾಧೀನವಾಗಿರುವ ಜಾಗಕ್ಕೆ ಹಾಗೂ ಬೆಳೆ ಪರಿಹಾರ, ಖಾತೆ ಬದಲಾವಣೆ, ಹೊಳೆನರಸೀಪುರ ತಾಲ್ಲೂಕಿನ ಕಾಮಸಮುದ್ರದಲ್ಲಿ ಗೋಮಾಳದಲ್ಲಿ ಎರಡು ಗುಂಟೆ ಜಾಗ ಕಲ್ಪಿಸುವಂತೆ ಅಹವಾಲು ಅರ್ಜಿಗಳು ಸ್ವೀಕಾರವಾಯಿತು.

> ಪೌತಿಖಾತೆ, ಹದ್ದುಬಸ್ತು, ವಿದ್ಯುತ್ ಸಂಪರ್ಕ ಕಲ್ಪಿಸುವುದು, ಸಾಗುವಳಿ ಚೀಟಿ, ಕಂದಾಯ ಗ್ರಾಮ, ಖಾತೆ ಮಾಡುವ ಬಗ್ಗೆ, ಪೋಡಿ ದುರಸ್ತಿ, ಪಹಣಿ ತಿದ್ದುಪಡಿ, ಹೊಲಕ್ಕೆ ದಾರಿ ಬಿಡಿಸಿಕೊಡುವ ಬಗ್ಗೆ, ಶ್ರವಣಬೆಳಗೊಳದಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ, ಇನಾಮು ರದ್ದುಪಡಿಸುವ ಕುರಿತು, ಕೊಣನೂರು ಗ್ರಾಮ ಪಂಚಾಯಿತಿಯಲ್ಲಿ ಪೌರಕಾರ್ಮಿಕರಿಗೆ ಹಕ್ಕು ಪತ್ರ ನೀಡಲು ಮನವಿ ಸ್ವೀಕರಿಸಿದ ಅವರು, ಬಂದು ತಿದ್ದುಪಡಿ ಮಾಡಿರುವವರ ಮೇಲೆ ಎಫ್.ಐ.ಆರ್ ದಾಖಲಿಸುವಂತೆ ಸೂಚಿಸಿದರಲ್ಲದೆ, ವಿದ್ಯುತ್ ಲೈನ್ ಹಾದು ಹೋಗಿರುವ ಭೂ ಮಾಲೀಕರಿಗೆ ಪರಿಹಾರ ನೀಡಲು ಒಂದು ಸಭೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರಿಗೆ ಕಾನೂನು ಸೇವೆಗಳ ಸಹಾಯಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಒಂದು ಕೋಶ ತೆರೆಯಲಾಗಿದೆ ಯಾರ ಸಹಾಯವಿಲ್ಲದವರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಬಾಲ ಗರ್ಭಿಣಿ, ಫೋಕ್ಸೋ ಹಾಗೂ ಮಾದಕ ವಸ್ತುಗಳ ಸೇವನೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲಾ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡುವಂತೆ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಪೂರ್ಣಿಮಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

# 7 ತಿಂಗಳಿಗೆ ಬಯಲಾಯ್ತು ಡಾಂಬರು ರಸ್ತೆ ಕಾಮಗಾರಿ ಗುಣಮಟ್ಟ!

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಳೇಬೀಡು:ಇಲ್ಲಿಯ ಕರಿಯಮ್ಮ ಬೀದಿ ಹಾಗೂ ಬ್ರಾಹ್ಮಣರ ಬೀದಿಯ ರಸ್ತೆಗಳಲ್ಲಿ ಡಾಂಬರೀ ಕಾಮಗಾರಿ ಮುಗಿದು 7 ತಿಂಗಳಿಗೇ ಗುಂಡಿ ಬಿದ್ದು ವಾಹನ ಸಂಚಾರಕ್ಕೆ ತೊಡಕಾಗಿದೆ.

ಈ ರಸ್ತೆಗಳು ಸಾಕಷ್ಟು ಜನ ವಸತಿ ಪ್ರದೇಶ ಹೊಂದಿವೆ. ಈ ರಸ್ತೆಯಲ್ಲಿ ಶಾಲಾ, ಕಾಲೇಜುಗಳಿವೆ. ಈ ರಸ್ತೆಯಲ್ಲಿರುವ ಗ್ರಾಮ ದೇವತೆ ಕರಿಯಮ್ಮ ದೇವಾಲಯ ಪ್ರತಿನಿತ್ಯ ಸಾಕಷ್ಟು ಮಂದಿ ಭಕ್ತರು ಆಗಮಿಸುತ್ತಾರೆ. ಮುತ್ತಿನ ವೀರಭದ್ರಸ್ವಾಮಿ, ಕುಂಬಳೇಶ್ವರ ಹಾಗೂ ಕಸ್ತೂರಿ. ರಂಗನಾಥ ಸ್ವಾಮಿ ಎಂಬ ಹೊಯ್ಸಳರ ಕಾಲದ ದೇವಾಲಯಗಳು ಈ ರಸ್ತೆಯಲ್ಲಿವೆ. ಪ್ರವಾಸೋದ್ಯಮ ಇಲಾಖೆಯಿಂದ ಪ್ರಚಾರ ಕೈಗೊಂಡು ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಸದುದ್ದೇಶ ಇದೆ.ಯೊನೆಸ್ಕೊದವರು ಹಲವಾರು ಬಾರಿ ದೇವಾಲಯಗಳ ವಿಕ್ಷಣೆ ಮಾಡಿದ್ದಾರೆ. ಲೋಕೋಪಯೋಗಿ ಇಲಾಖೆ ಪ್ರಮುಖವಾದ ರಸ್ತೆಯಲ್ಲಿ ಕಳಪೆ ಕಾಮಗಾರಿ ಕೈಗೊಂಡಿದೆ ಎಂದು ಬಸವೇಶ್ವರ ಬಳಗದ ಆಧ್ಯಕ್ಷ ಎಚ್.ಸಿ.ಚೇತನ್ ದೂರಿದ್ದಾರೆ. ಬೇಲೂರು ಮುಖ್ಯ ರಸ್ತೆಯಿಂದ ಬ್ರಾಹ್ಮಣರ ಬೀದಿ ಪ್ರವೇಶದಲ್ಲಿ 100 ಮೀಟರ ರಸ್ತೆ ಕಾಮಗಾರಿ ಮಾಡಿಲ್ಲ. ಕಾಲಕ್ರಮೇಣ ರಸ್ತೆಗೆ ಡಾಂಬರ್ ಹಾಕಿದ ಅವಶೇಷ ಇಲ್ಲದಂತೆ ಕಿತ್ತು ಹೋಗುವ ಸಾಧ್ಯತೆ ಇದೆ. ಕಾಮಗಾರಿಗೆ ಮಂಜೂರಾದ ರೂ1ಕೋಟಿ ಅನಗತ್ಯ ವೆಚ್ಚವಾಗಿದೆ ಎಂದು ಜನರು ದೂರಿದರು.


ಲೋಕೋಪಯೋಗಿ ಇಲಾಖೆಯವರು ರಸ್ತೆ ಸರಿಪಡಿಸಿ, ಜನರ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ವಾರ್ಡ್ ಸದಸ್ಯ ಎಚ್.ಎಂ.ನಿಂಗಪ್ಪ ವಿನಂತಿಸಿಕೊಂಡಿದ್ದಾರೆ. ನಾನು ಬೇಲೂರು ತಾಲ್ಲೂಕಿಗೆ ಬರುವ ಮೊದಲೆ ಕಾಮಗಾರಿ ಮುಗಿದಿದೆ. ಶೀಘ್ರದಲ್ಲಿಯೇ ಸ್ಥಳ ಪರಿಶೀಲನೆ ನಡೆಸುತ್ತೇವೆ ಎಂದು ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೃಷ್ಣೇಗೌಡ ಹೇಳಿದರು.

# ಸಾಮಾಜಿಕ ಬದ್ದತೆಯೇ ಶಿಕ್ಷಣದ ಆಧಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳು ವ್ಯಾಪಾರೀಕರಣಗೊಳ್ಳುತ್ತಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ ಎಂದು ಮೂಡಬಿದರೆ ಆಳ್ವಾಸ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ. ಎಂ. ಮೋಹನ್ ಆಳ್ವ ತಿಳಿಸಿದರು.

ಪಟ್ಟಣದ ಶಿಕ್ಷಕರ ಭವನದಲ್ಲಿ ಶನಿವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರಗಳು ಸಮಾಜದ ಪ್ರಮುಖ ಅಂಗಗಳಾಗಿದ್ದು ಇಲ್ಲಿ ಜನಪರ ಕಾಳಜಿ, ಸಾಮಾಜಿಕ ಬದ್ದತೆ, ಮಾನವೀಯತೆ, ವಿಶ್ವಾಸ ಪ್ರೀತಿ ಇರಬೇಕು. ಆದರೆ ಇದನ್ನು ಮರೆತು ಹಣಗಳಿಕೆಯಷ್ಟೆ ಗುರಿಯಾಗುತ್ತಿರುವುದು ಅಪಾಯಕಾರಿ ಬೆಳವಣಿಗೆಯಾಗಿದೆ ಎಂದರು.



ಆಳ್ವಾಸ್ ಶಿಕ್ಷಣ ಸಂಸ್ಥೆ ಮಿನಿ ಇಂಡಿಯಾ ಇದ್ದಂತೆ ಇಲ್ಲಿ ದೇಶದ ವಿವಿಧ ಭಾಷೆ , ಜಾತಿ , ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಶಿಕ್ಷಣ ಪಡೆದು ಬದುಕು ರೂಪಿಸಿಕೊಳ್ಳುತ್ತಿದ್ದಾರೆ. ಶಿಕ್ಷಣದ ಜತೆಗೆ ಕ್ರೀಡೆ, ಸಾಂಸ್ಕೃತಿಕ ಕ್ಷೇತ್ರಗಳಲ್ಲೂ ಇಲ್ಲಿನ ವಿದ್ಯಾರ್ಥಿಗಳ ಸಾಧನೆ ಬಹಳ ಎತ್ತರದ ಮಟ್ಟದಲ್ಲಿದೆ. ಸಂಸ್ಥೆ ಸಮಾಜಿಕವಾಗಿ ಹಿಂದುಳಿದವರು, ಅಂಗವಿಕಲ ವಿದ್ಯಾರ್ಥಿಗಳನ್ನು ದತ್ತು ಪಡೆದು ಉಚಿತ ಶಿಕ್ಷಣ ನೀಡುತ್ತಿದೆ. ಕನ್ನಡದ ಉಳಿವಿಗಾಗಿ ಕನ್ನಡ ಮಾಧ್ಯಮದಲ್ಲಿ ಉಚಿತ ಶಿಕ್ಷಣ ನೀಡಲಾಗುತ್ತಿದೆ. ಇಂದಿನ ಕಾಲಘಟ್ಟದಲ್ಲಿ ಬಹಳ ಬದಲಾವಣೆಗಳಾಗುತ್ತಿದ್ದು ಮಕ್ಕಳನ್ನು ರೂಪಿಸುವಲ್ಲಿ ಶಿಕ್ಷಕರ ಜತೆಗೆ ಪೋಷಕರ ಪಾತ್ರವೂ ಮಹತ್ವದ್ದಾಗಿದೆ. ಖಾಸಗಿ ಶಿಕ್ಷಣ ಸಂಸ್ಥೆಗಳು ಬಡ ವಿದ್ಯಾರ್ಥಿಗಳನ್ನು ದತ್ತು ಪಡೆದು ಉಚಿತ ಶಿಕ್ಷಣ ನೀಡುವ ಮೂಲಕ ಸಾಮಾಜಿಕ ಬದ್ದತೆ ಮೆರೆಯಬೇಕಿದೆ ಎಂದರು. ಸಭಿಕರೊಂದಿಗೆ ಸಂವಾದ ನಡೆಸಿದರು.

ಜಿಲ್ಲಾ ಸಹಕಾರ ಬ್ಯಾಂಕ್ ನಿರ್ದೇಶಕ ಕೆ. ಸತೀಶ್ ಉಪಸ್ಥಿತರಿದ್ದರು.

# ಪರಿಶಿಷ್ಟ ಸಮುದಾಯದ ಅಭಿವೃದ್ಧಿಗೆ ಒತ್ತು




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ : ಪರಿಶಿಷ್ಟ ಸಮುದಾಯಗಳು ಸರ್ಕಾರದ ಸವಲತ್ತುಗಳನ್ನು ಸದುಪಯೋಗಪಡಿಸಿಕೊಂಡು ಅಭಿವೃದ್ಧಿ ಹೊಂದಬೇಕು ಎಂದು ಬಿಜೆಪಿ ತಾಲೂಕು ಪ್ರಧಾನ ಕಾರ್ಯದರ್ಶಿ, ಮಧು ಬೋಮ್ಮನಕೆರೆ ತಿಳಿಸಿದರು.

ತಾಲೂಕಿನ ಬೊಮ್ಮನಕೆರೆ ಗ್ರಾಮದ ಅಂಬೇಡ್ಕರ್ ಸಮುದಾಯ ಭವನಕ್ಕೆ ಶಾಸಕರ ಅನುದಾನದಲ್ಲಿ ಮಂಜೂರಾಗಿದ್ದ ಅಡುಗೆ ಮನೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ಕ್ಷೇತ್ರದ ಶಾಸಕರಾದ ಸಿಮೆಂಟ್ ಮಂಜುನಾಥ್ ರವರು ತಮ್ಮ ಅವಧಿಯಲ್ಲಿ ಪರಿಶಿಷ್ಟ ಸಮುದಾಯದ ಅಭಿವೃದ್ಧಿಗೆ ಹೆಚ್ಚಿನ ಮಹತ್ವವನ್ನು ನೀಡಿದ್ದಾರೆ, ನೀರು, ರಸ್ತೆ ,ಚರಂಡಿ ಹಾಗೂ ಅಪೂರ್ಣಗೊಂಡಿರುವ ಅಂಬೇಡ್ಕರ್ ಭವನಗಳ ಮೂಲಭೂತ ಸೌಲಭ್ಯಗಳಿಗೆ ಹೆಚ್ಚಿನ ಅನುದಾನವನ್ನು ನೀಡುತ್ತಿದ್ದಾರೆ ಈ ನಿಟ್ಟಿನಲ್ಲಿ ಹಲವಾರು ವರ್ಷಗಳಿಂದ ಕಟ್ಟಡವಿದ್ದರೂ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿದ್ದ ಗ್ರಾಮದ ಅಂಬೇಡ್ಕರ್ ಭವನಕ್ಕೆ ಸುಮಾರು 7.50 ಲಕ್ಷರು ಅನುದಾನ ನೀಡಲಿದ್ದು ಮೊದಲ ಹಂತದಲ್ಲಿ 3 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ. ಈ ಹಣದಲ್ಲಿ ಹಳೆಯ ಕಟ್ಟಡದ ಉಳಿದ ಕಾಮಗಾರಿ ಹಾಗೂ ಹೊಸ ಅಡುಗೆಮನೆಯನ್ನು ನಿರ್ಮಾಣ ಮಾಡಲಾಗುವುದು . ಎರಡನೇ ಹಂತದ ಹಣ ಬಿಡುಗಡೆಯಾದಾಗ ಕಟ್ಟಡದ ಕಾಮಗಾರಿ ಸಂಪೂರ್ಣಗೊಳ್ಳಲಿದೆ, ನಿಮ್ಮ ಅಭಿವೃದ್ಧಿಗೆ ಪೂರಕವಾಗಿ ಶ್ರಮಿಸುತ್ತಿರುವ ಶಾಸಕರೊಂದಿಗೆ ಕೈಜೋಡಿಸುವ ಮೂಲಕ ಹೆಚ್ಚಿನ ಅನುದಾನಕ್ಕೆ ತಾವುಗಳು ಸಹ ಕಾರಣೀಭೂತರಾಗಬೇಕೆಂದು ಹೇಳಿದರು. ಗ್ರಾಮ ಪಂಚಾಯಿತಿ ಸದಸ್ಯ ರೇಣುಕಾ ರವರು ಮಾತನಾಡಿ ಅಂಬೇಡ್ಕರ್ ಭವನದ ಕೆಲಸ ಅನುದಾನವಿಲ್ಲದೆ ಸೊರಗಿತ್ತು, ಇದೀಗ ಶಾಸಕರ ಮುತುವರ್ಜಿಯಿಂದಾಗಿ ಸಂಪೂರ್ಣ ಕಾಮಗಾರಿ ನಡೆಯುತ್ತಿದೆ ಕಟ್ಟಡಕ್ಕೆ ಪಂಚಾಯಿತಿ ಅನುದಾನದಲ್ಲಿ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ ಮುಂದಿನ ದಿನಗಳಲ್ಲಿ ಊಟದ ಹಾಲನ್ನು ಸಹ ನಿರ್ಮಿಸಲಾಗುವುದೆಂದು ಅಭಿಪ್ರಾಯ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಸದಸ್ಯರಾದ ಸುದರ್ಶನ್, ಬಿಜೆಪಿ ಮುಖಂಡ ಸುಂದರೇಶ್ ಹೊಳಲಹಳ್ಳಿ ಸ್ಟೀವನ್ ಪ್ರಕಾಶ್ ಹಿರಿಯೂರು, ಗ್ರಾಮಸ್ಥರುಗಳಾದ ಶಿವಶಂಕರ್, ಜಯಶಂಕರ್, ಬೈರಯ್ಯ ,ವೇಣು ಕುಮಾರ್ ನಾಗರಾಜು ಮತ್ತು ಇತರರು ಉಪಸ್ಥಿತರಿದ್ದರು

# ಗ್ರಾಮೀಣ ಮಕ್ಕಳಿಗೆ ಇಂಗ್ಲಿಷ್ ಶಿಕ್ಷಣ ಅಗತ್ಯ

## ಶಣವಿನಕುಪ್ಪೆಯಲ್ಲಿ ಗುರು ವಂದನೆ ಕಾರ್ಯಕ್ರಮ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಗ್ರಾಮೀಣ ಪ್ರದೇಶದಲ್ಲಿ ಕಲಿಯುವ ಮಕ್ಕಳಿಗೆ ಆಂಗ್ಲ ಶಿಕ್ಷಣ ಅತ್ಯವಶ್ಯಕವಾಗಿದೆ ಎಂದು ಶಣವಿನಕುಪ್ಪೆ ಗ್ರಾಪಂ ಸದಸ್ಯ ಸಂತೋಷ್ ಹೇಳಿದರು.

ತಾಲೂಕಿನ ಶಣವಿನಕುಪ್ಪೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ವರ್ಗಾವಣೆಯಾದ ರೌಷನ್ ಅರ ಅವರಿಗೆ ಶನಿವಾರ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಹಾಗೂ ಗುರು ವಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಗರ ಪ್ರದೇಶದ ಮಕ್ಕಳಿಗೆ ಹೋಲಿಸಿದರೆ ಹಳ್ಳಿಗಳಲ್ಲಿ ಕಲಿಯುವ ವಿದ್ಯಾರ್ಥಿಗಳು ಇಂಗ್ಲಿಷ್ ಶಿಕ್ಷಣದಿಂದ ವಂಚಿತರಾಗುವಂತಾಗಿದೆ. ಇದರಿಂದ ಕೆಲ ಪಾಲಕರು ತಮ್ಮ ಮಕ್ಕಳನ್ನು ನಗರ ಪ್ರದೇಶದ ಕಾನ್ವೆಂಟ್ ಗಳಿಗೆ ಕಳುಹಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಪರಿಣಾಮವಾಗಿ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಕೊರತೆ ಉಂಟಾಗಿ ಮುಚ್ಚುವಂತಾಗಿದೆ. ತಮ್ಮೂರಿನ ಶಾಲೆಗೆ ಶಿಕ್ಷಕಿಯಾಗಿ ನೇಮವಾಗಿ ಮೂರು ವರ್ಷಗಳಿಂದ ಸೇವೆ ಸಲ್ಲಿಸಿದ ರೌಷನ್ ಅರ ಅವರು ಮಕ್ಕಳಿಗೆ ಇಂಗ್ಲಿಷ್ ಕಲಿಕೆಗೆ ಒತ್ತು ನೀಡಿ ಗುಣಮಟ್ಟದ ಶಿಕ್ಷಣ ನೀಡಿದ್ದರಿಂದ ಶಾಲೆಯಲ್ಲಿ ಮಕ್ಕಳ ಹಾಜರಾತಿಯಲ್ಲಿ ಹೆಚ್ಚಳವಾಗಿದೆ. ಇಲ್ಲವಾದರೆ ಪಟ್ಟಣಕ್ಕೆ ಸಮೀಪವಿರುವ ಈ ಶಾಲೆಯಲ್ಲಿಯೂ ಮಕ್ಕಳ ಕೊರತೆ ಉಂಟಾಗುತ್ತಿತ್ತು. ಇದನ್ನು ತಪ್ಪಿಸಿದ ಶ್ರೇಯಸ್ಸು ರೌಷನ್ ಅರ ಅವರಿಗೆ ಸಲ್ಲುತ್ತದೆ. ತಮ್ಮೂರಿನ ಶಾಲೆಯಲ್ಲಿ ಇಂಗ್ಲಿಷ್ ಶಿಕ್ಷಕಿ ಇಲ್ಲವಾಗಿದ್ದು ಇದೇ ಶಾಲೆಗೆ ರೌಷನ್ ಅರ ಅವರನ್ನು ಮರು ವರ್ಗಾಯಿಸಬೇಕು. ಇಂಗ್ಲಿಷ್ ಕಲಿಕೆಗೆ ಹೆಚ್ಚು ಆದ್ಯತೆ ನೀಡುವ ಮೂಲಕ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ಉಳಿಸಬೇಕು ಎಂದು ಮನವಿ ಮಾಡಿದರು.

ಗುರು ವಂದನೆ ಸ್ವೀಕರಿಸಿದ ಶಿಕ್ಷಕಿ ರೌಷನ್ ಅರ ಮಾತನಾಡಿ, ಮಕ್ಕಳಿಗೆ ಕಲಿಕೆ ಜತೆಗೆ ಶಿಸ್ತು, ಸಂಯಮ ರೂಡಿಸಿಕೊಂಡು ಉತ್ತಮ ಸಂಸ್ಕಾರ ಪ್ರಾಥಮಿಕ ಹಂತದಿಂದಲೇ ಸಿಗುವಂತಾಗಬೇಕು. ಅಂತಹ ಮಕ್ಕಳು ಭವಿಷ್ಯದಲ್ಲಿ ಉನ್ನತ ಸಾಧನೆ ಮಾಡಲು ಸಹಕಾರಿಯಾಗುತ್ತದೆ. ಈ ಹಳ್ಳಿ ಶಾಲೆಯಲ್ಲಿ ಇಂಗ್ಲಿಷ್ ಕಲಿಕೆಗೆ ಹೆಚ್ಚು ಒತ್ತು ನೀಡಿರುವ ಕುರಿತು ಚಿತ್ರಿಸಿ ಹಂಚಿದ ವಿಡಿಯೋಗಳಿಗೆ ರಾಜ್ಯವ್ಯಾಪ್ತಿ ಮೆಚ್ಚುಗೆ ವ್ಯಕ್ತವಾಗಿತ್ತು. ಎಲ್ಲಾ ಪ್ರಶಸ್ತಿಗಳಿಗಿಂತ ಶಾಲಾ ಮಕ್ಕಳ ಪ್ರೀತಿ ನಮಗೆ ಸಿಗುವ ಅತಿದೊಡ್ಡ ಗೌರವ ಎಂದು ತಿಳಿಸಿದರು.

ಎಸ್.ಡಿ.ಎಂ.ಸಿ. ಅಧ್ಯಕ್ಷ ಮಂಜುನಾಥ್, ಮುಖ್ಯ ಶಿಕ್ಷಕಿ ಯಾಸ್ಮೀನ್ ತಾಜ್, ಸಹ ಶಿಕ್ಷಕರಾದ ಸಾಗರ್, ಪರಮೇಶ್, ದಿವ್ಯಾಮಣಿ, ಅಂಗನವಾಡಿ ಶಿಕ್ಷಕಿ ಮಂಜುಳಾ, ಕುಮಾರ್, ಗ್ರಾಮಸ್ಥರು ಇದ್ದರು. ಶಿಕ್ಷಕಿ ರೌಷನ್ ಅರ ಅವರಿಗೆ ನೆನಪಿನ ಕಾಣಿಕೆ ನೀಡಿ ಗುರು ವಂದನೆ ಸಲ್ಲಿಸಲಾಯಿತು

# ಬಾಲ್ಯ ವಿವಾಹ ನಿಷೇಧಕ್ಕೆ ಎಲ್ಲರ ಸಹಕಾರ ಅಗತ್ಯ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ : ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನಿನ ಬಗ್ಗೆ ಅರಿವು ಮೂಡಿಸುವುದು, ಕಾನೂನಿನ ನೆರವು ಮತ್ತು ಸೇವೆಗಳನ್ನು ಎಲ್ಲರಿಗೂ ತಲುಪಿಸುವುದು ಬಾಲ್ಯ ವಿವಾಹವನ್ನು ನಿಷೇಧಿಸುವುದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶೆ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದ್ರಾಕ್ಷಾಯಿಣಿ ಅವರು ತಿಳಿಸಿದ್ದಾರೆ.

ಹಾಸನ ತಾಲ್ಲೂಕಿನ ಐದಳ್ಳ ಕಾವಲು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಬಾಲ್ಯ ವಿವಾಹ ನಿಷೇಧ ಅರಿವು, ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮವನ್ನು ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು ಎಲ್ಲರು ಕಾನೂನಿನ ಚೌಕಟ್ಟಿನೊಳ್ಳಗೆ ನಡೆದುಕೊಂಡರೆ ಉತ್ತಮ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದ್ದಾರೆ.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜ್ಯೋತಿ ಲಕ್ಷ್ಮಿ ಕೆ.ಸಿ ಅವರು ಮಾತನಾಡಿ ಬಾಲ್ಯ ವಿವಾಹ ನಿಷೇಧ ಮಾಡುವಲ್ಲಿ ಪೋಷಕರ ಮತ್ತು ಮಕ್ಕಳ ಪಾತ್ರದ ಬಗ್ಗೆ ಮತ್ತು ಬಾಲ್ಯ ವಿವಾಹದ ದುಷ್ಟ ಪರಿಣಾಮಗಳ ಬಗ್ಗೆ ಮಾಹಿತಿ ನೀಡಿದರು.

ವೈದ್ಯಾಧಿಕಾರಿ ರಜಿನಿ ಆರ್. ಎಸ್ ಮಾತನಾಡಿ ಮಹಿಳೆಯರಲ್ಲಿ ಋತುಸ್ರಾವದ ಸಮಸ್ಯೆಗಳು ಮತ್ತು ಕ್ಯಾನ್ಸರ್ ತಡೆಗಟ್ಟುವ ಬಗ್ಗೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಕುಮಾರ್ ನಾಯ್ಕ್, ಗ್ರಾಮದ ಮುಖ್ಯಸ್ಥರಾದ ರಾಮ ನಾಯ್ಕ್, ಅಭಿಷೇಕ್, ನಾಗರಾಜ್ ನಾಯ್ಕ್ ಮತ್ತು ಶಾಲಾ ಮುಖೋಪದ್ಯಾಯರು, ಶಾಲಾ ಸಿಬ್ಬಂದಿಗಳು, ಗ್ರಾಮದ ಮಹಿಳೆಯರು ಮತ್ತು ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಒಂದು ಸಿಸಿ ಕ್ಯಾಮೆರಾ ಹತ್ತು ಬಂದೂಕಿಗೆ ಸಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ : ಇತ್ತೀಚಿನ ದಿನದಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು, ಪ್ರತಿಯೊಬ್ಬ ಬೆಳೆಗಾರರು ತಮ್ಮ ಜಮೀನಿನಲ್ಲಿ ಹಾಗೂ ಉಗ್ರಾಣಗಳಿಗೆ ಬೆಳೆ-ದಾಸ್ತಾನು ಬಳಿ ಸಿಸಿ ಕ್ಯಾಮೆರಾಗಳನ್ನು ಹಾಕಿಸಿಕೊಳ್ಳುವ ಮೂಲಕ ಕಳ್ಳತನದ ಅಪರಾಧವನ್ನು ತಡೆಗಟ್ಟಬಹುದು. ಒಂದು ಸಿಸಿ ಕ್ಯಾಮೆರಾ ಹತ್ತು ಬಂದೂಕಿಗೆ ಸಮವಾಗಿ ಕೆಲಸ ಮಾಡುತ್ತದೆ. ಮುಂದಿನ ದಿನದಲ್ಲಿ ಎಲ್ಲಾ ಬೆಳೆಗಾರರು ಸಿಸಿ ಕ್ಯಾಮೆರಾ ಹಾಕಿಸಿಕೊಳ್ಳಿ ಎಂದು ಡಿವೈಎಸ್ಪಿ ಎಸ್.ಕೆ.ಮಾಲತೀಶ ಸಲಹೆ ನೀಡಿದರು.



ಶುಕ್ರವಾರ ವಳಲಹಳ್ಳಿ ಗ್ರಾಮಪಂಚಾಯಿತಿ ಬೆಳೆಗಾರರ ಸಂಘದ 13ನೇ ಮಾಸಿಕ ಸಭೆ ನೆಡೆಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿ ಬೆಳೆಗಾರರಿಗೆ ಕಾಫಿ, ಮೆಣಸು ಹಾಗೂ ಏಲಕ್ಕಿ ಸೇರಿದಂತೆ ವಾಣಿಜ್ಯ ಬೆಳೆಗಳ ಕಳ್ಳತನ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಬೆಳೆಗಾರರು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು ಕಾಫಿ, ಮೆಣಸು ಹಾಗೂ ಏಲಕ್ಕಿ ತೋಟಕ್ಕೆ ಕೆಲಸಕ್ಕೆಂದು ಬರುವ ಹೊರರಾಜ್ಯದವರ ವೈಯಕ್ತಿಕ ದಾಖಲಾತಿಗಳನ್ನು ಇಟ್ಟುಕೊಳ್ಳುವ ಮೂಲಕ ಅನುಮಾನಾಸ್ಪದ ವ್ಯಕ್ತಿಗಳು ಕಂಡು ಬಂದಲ್ಲಿ ಕೂಡಲೇ ಪೊಲೀಸ್ ಠಾಣೆಗೆ ದೂರು ನೀಡಿ. ಇದರಿಂದ ಕಳ್ಳತನ ಸೇರಿದಂತೆ ಬೆಳೆಗಾರರ ಮೇಲೆ ನಡೆಯುವ ದೌರ್ಜನ್ಯವನ್ನು ತಡೆಗಟ್ಟಬಹುದು ಎಂದು ಹೇಳಿದರು. ಪ್ರತಿಯೊಬ್ಬ ಬೆಳೆಗಾರರು ತಮ್ಮ ತೋಟಗಳಲ್ಲಿ ಹಾಗೂ ಕಾಫಿ ಕಟಾವು ಮಾಡಿ ಒಣಗಿ ಹಾಕಿರುವ ಪ್ರದೇಶದಲ್ಲಿ ಸಿಸಿ ಕ್ಯಾಮರಗಳನ್ನು ಹಾಕಿಕೊಳ್ಳಬೇಕು. ಇದರಿಂದ ಅಪರಾಧಿಗಳನ್ನು ಬಹುಬೇಗನೆ ಪತ್ತೆಹಚ್ಚಬಹುದು.ಹಾಗೂ ಕಾಫಿ, ಮೆಣಸು, ಏಲಕ್ಕಿ ಕಳ್ಳತನವಾದರೆ ಅಥವಾ ಯಾವುದೇ ಅಪರಾಧಗಳಾದಲ್ಲಿ ಕೂಡಲೇ ಪೋಲಿ ಸಹಾಯವಾಣಿ 112 ಸಂಪರ್ಕಿಸಿ. ನಂತರ ಸಂಬಂಧ ಪಟ್ಟ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿ. ವರ್ತಕರು ಅಪರಿಚಿತ ವ್ಯಕ್ತಿಗಳು ಕಾಫಿ ಮೆಣಸು ಏಲಕ್ಕಿಯನ್ನು ಮಾರಲು ಬಂದಾಗ ಅವರ ಆರ್‌ಟಿಸಿ ಹಾಗೂ ಆಧಾರ್ ಕಾರ್ಡನ್ನು ತೆಗೆದುಕೊಳ್ಳಬೇಕು. ಹಾಗೂ ಮಾರಾಟ ಮಾಡಲು ಬರುವ ವ್ಯಕ್ತಿಗಳ ಸಂಪರ್ಕ ಸಂಖ್ಯೆ ಸೇರಿದಂತೆ ಅವರ ವಿಳಾಸವನ್ನು ತಮ್ಮ ಡೈರಿಯಲ್ಲಿ ಬರೆದಿಟ್ಟುಕೊಳ್ಳಬೇಕು. ಇವರೊಂದಿಗೆ ಹಣದ ವ್ಯವಹಾರವನ್ನು ಬ್ಯಾಂಕಿನ ಮೂಲಕ ಮಾಡಬೇಕು. ಇದರಿಂದ ಇಂಥವರೇನಾದರೂ ಪೊಲೀಸರು ಬಹುಬೇಗನೆ ಪತ್ತೆ ಹಚ್ಚಬಹುದಾಗಿದೆ ಎಂದರು. ಶಾಲಾ ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳು ಇತ್ತೀಚಿನ ದಿನದಲ್ಲಿ ಗಾಂಜಾ ವೆಸನಿಗಳಾಗುತ್ತಿರುವ ಪ್ರಕರಣಗಳು ಬೆಳಕಿಗೆ ಬರುತ್ತಿದೆ. ತಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿ ಎಲ್ಲಿಯಾದರೂ ಗಾಂಜಾ ಮಾರಾಟ ಅಥವಾ ಗಾಂಜಾ ಬೆಳೆದಿದ್ದರೆ ಕೂಡಲೇ ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿ, ಮಾಹಿತಿಯನ್ನು ಕೊಟ್ಟವರ ಹೆಸರನ್ನು ಗೌಪ್ಯವಾಗಿಡಲಾಗುವುದು ಎಂದು ಹೇಳಿದರು.

ಎಲ್ಲಿಯಾದರೂ ಕಾಡಾನೆಗಳು ಕಂಡು ಬಂದಲ್ಲಿ ಕೂಡಲೇ ಸಾಮಾಜಿಕ ಜಾಲತಾಣದಲ್ಲಿ ವಿಚಾರಗಳನ್ನು ಹಂಚಿಕೊಳ್ಳಿ, ಇದರಿಂದ ಆ ಪದೇಶದಲ್ಲಿ ಸಂಚರಿಸುವ ವಾಹನ ಚಾಲಕರು ಹಾಗೂ ಸಾರ್ವಜನಿಕರು ಎಚ್ಚೆತ್ತುಕೊಳ್ಳುವ ಮೂಲಕ ಕಾಡಾನೆಗಳಿಂದ ಮುಂದೆ ಉಂಟಾಗುವ ಅನಾಹುತವನ್ನು ತಪ್ಪಿಸಬಹುದು. ಒಟ್ಟಾರೆ ಬೆಳೆಗಾರರು ಪೊಲೀಸ್ ಇಲಾಖೆಯೊಂದಿಗೆ ನಿಕಟ ಸಂಪರ್ಕ ಇಟ್ಟುಕೊಳ್ಳುವ ಮೂಲಕ ಕಳ್ಳತನ ಪ್ರಕರಣಗಳು ಸೇರಿದಂತೆ ಬೆಳೆಗಾರರ ಮೇಲೆ ನಡೆಯುವ ದುಷ್ಕೃತ್ಯಗಳನ್ನು ತಡೆಗಟ್ಟಬಹುದು ಎಂದು ಹೇಳಿದರು.

ವೇದಿಕೆಯಲ್ಲಿ ಹಾಸನ ಜಿಲ್ಲಾ ಬೆಳೆಗಾರರ ಸಂಘದ ಮಾಜಿ ಸಂಘಟನಾ ಕಾರ್ಯದರ್ಶಿ ಕೆ.ಪಿ ಕೃಷ್ಣೇಗೌಡ ,ವಳಲಹಳ್ಳಿ ಬೆಳೆಗಾರರ ಸಂಘದ ಅಧ್ಯಕ್ಷರಾದ ದರ್ಶನ್ ಮರ್ಜನಹಳ್ಳಿ,ಗೌರವ ಅಧ್ಯಕ್ಷರಾದ ರಮೇಶ್,ಉಪಾಧ್ಯಕ್ಷರಾದ ರುದ್ರೇಶ್, ಖಜಾಂಚಿಗಳಾದ ಹೂವಣ್ಣ ಗೌಡ, ಕಾರ್ಯದರ್ಶಿ ಅರುಣ್ ಗೌಡ ಸೇರಿದಂತೆ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯ ಬೆಳೆಗಾರರು ಇದ್ದರು.

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post



# ಸಂಕಷ್ಟದಲ್ಲೂ ಭರವಸೆಯ ಬೆಳಕಾಗಿ ಕಂಡವರು ತಗಡೂರು

## ಲೋಹಿಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗಣ್ಯರ ಶ್ಲಾಘನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೆಂಗಳೂರು: ನಿಸ್ವಾರ್ಥ ಸೇವಾ ಮನೋಭಾವನೆಯಿಂದ ಕೆಲಸ ಮಾಡುವವರ ಸಂಖ್ಯೆ ವಿರಳವಾಗಿದೆ. ಅಂಥವರ ನಡುವೆ ಟಿ.ವಿ. ಶಿವಾನಂದ ತಗಡೂರು ಅವರು ಗಮನ ಸೆಳೆಯುವ ಕೆಲಸ ಮಾಡುತ್ತಿರುವುದು ಅಭಿನಂದನೀಯ ಎಂದು ವಿವಿಧ ಕ್ಷೇತ್ರಗಳ ಗಣ್ಯರು ಶ್ಲಾಘಿಸಿದರು.

ಬೆಂಗಳೂರು ನಾಗರಿಕರ ವೇದಿಕೆ ಮತ್ತು ಬುದ್ಧ ಬಸವ ಗಾಂಧಿ ಸಾಂಸ್ಕೃತಿಕ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷರಾಗಿ 3ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದ ತಗಡೂರು ಅವರಿಗೆ ಹಮ್ಮಿಕೊಂಡಿದ್ದ ನಾಗರೀಕ ಸನ್ಮಾನ ಮತ್ತು ಲೋಹಿಯಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಆತ್ಮೀಯವಾಗಿ ಅಭಿನಂದಿಸಿ, ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಗಾಂಧಿಭವನದ ಅಧ್ಯಕ್ಷ ಮತ್ತು ಶಿಕ್ಷಣ ತಜ್ಞ ನಾಡೋಜ ಡಾ.ವೂಡೇ ಪಿ.ಕೃಷ್ಣ ಮಾತನಾಡಿ, ಮುಖ್ಯವಾಹಿನಿ ಮಾಧ್ಯಮವು ಇಂದಿಗೂ ತನ್ನ ಗಟ್ಟಿತನದ ಮೂಲಕ ಘನತೆಯನ್ನು ಉಳಿಸಿಕೊಂಡು ಬಂದಿದೆ. ಇದೇ ನಮಗೆಲ್ಲ ಆಶಾದಾಯಕ ಬೆಳವಣಿಗೆ ಎಂದರು.



ರಾಮಮನೋಹರ ಲೋಹಿಯಾ ಅವರು ದೇಶದ ರಾಜಕಾರಣದಲ್ಲಿ ಚಲನೆ ತಂದವರು. ಲೋಹಿಯಾ ವಾದದಲ್ಲಿ ಬೆಳೆದು ಅರಳಿದ ಪ್ರತಿಭೆಗಳು ದೇಶ ಉದ್ದಗಲಕ್ಕೂ ಇದ್ದಾರೆ. ಅವರ ಹೆಸರಿನ ಪ್ರಶಸ್ತಿಯನ್ನು ಶಿವಾನಂದ ತಗಡೂರು ಅವರಿಗೆ ನೀಡುತ್ತಿರುವುದು ಅಭಿನಂದನೀಯ ಮತ್ತು ನಮಗೆಲ್ಲರಿಗೂ ಹೆಮ್ಮೆ ಎಂದರು.

ಸಂಘಟನೆ, ಸಂಸ್ಕಾರ, ಸೇವೆ ವ್ಯಕ್ತಿಯ ಸಾಧನೆಗೆ ಮುಖ್ಯ. ಇನ್ನೊಬ್ಬರ ಸೇವೆಯಲ್ಲಿ ನಮ್ಮನ್ನು ನಾವು ಕಳೆದುಕೊಳ್ಳುವುದೇ ಸಾರ್ಥಕ ಬದುಕು. ಅಂತಹ ವ್ಯಕ್ತಿತ್ವದ ತಗಡೂರು ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಆಶಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಪ್ರಜಾವಾಣಿ ಸಂಪಾದಕ ರವೀಂದ್ರ ಭಟ್ಟ ಐನಕೈ ಅವರು, ಪತ್ರಕರ್ತರನ್ನು ಟೀಕೆ ಮಾಡುವವರೇ ಹೆಚ್ಚು. ಆದರೆ ಪತ್ರಕರ್ತರಿಗೆ ನಾಗರಿಕ ಸನ್ಮಾನ ಮಾಡುತ್ತಿರುವುದು ಅತ್ಯಂತ ಅಪರೂಪ. ಲೋಹಿಯಾ ಪ್ರಶಸ್ತಿಗಿಂತಲೂ ಈ ನಾಗರೀಕ ಸನ್ಮಾನ ಮುಖ್ಯವಾದದ್ದು. ಇದಕ್ಕೆ ಭಾಜನರಾಗಿರುವ ಶಿವಾನಂದ ತಗಡೂರು ನಿಜಕ್ಕೂ ಅಭಿನಂದನೀಯ ಎಂದರು.

ಅಭಿನಂದನಾ ಭಾಷಣ ಮಾಡಿದ ಕನ್ನಡಪ್ರಭ ಸಂಪಾದಕ ರವಿಹೆಗಡೆ, ಪತ್ರಿಕೋದ್ಯಮದಲ್ಲಿರುವ ಎಡ-ಬಲದ ಸಂಘರ್ಷದ ನಡುವೆ ಯಾವುದಕ್ಕೂ ಅಂಟಿಕೊಳ್ಳದೆ ತಗಡೂರು ಸೇವೆ ಸಲ್ಲಿಸುತ್ತಿರುವುದನ್ನು ನಾನು ಹತ್ತಿರದಿಂದ ನೋಡಿದ್ದೇನೆ. ಎಲ್ಲಕ್ಕಿಂತಲೂ ಮೊದಲು ಮಾನವೀಯತೆಯೇ ನಿಜವಾದ ಪತ್ರಕರ್ತನ ಜವಾಬ್ದಾರಿ ಎನ್ನುವುದನ್ನು ಅರಿತು ಆ ನಿಟ್ಟಿನಲ್ಲಿಯೇ ಪತ್ರಕರ್ತರ ಸಂಘಟನೆಯನ್ನು ರೂಪಿಸಿ ನಡೆಸುತ್ತಿರುವುದು ವಿಶೇಷ ಎಂದು ಅವರ ಸೇವೆ ಸ್ಮರಿಸಿದರು.

ತ್ಯಾಗರಾಜ ಕೋ-ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಎಂ.ಆರ್.ವೆಂಕಟೇಶ್ ಮಾತನಾಡಿ, ಕೋವಿಡ್ ಸಂದರ್ಭದಲ್ಲಿ ಸಂಕಷ್ಟದಲ್ಲಿದ್ದ ಪತ್ರಕರ್ತರಿಗೆ ಹಗಲಿರಳು ನೆರವಾಗುವ ಮೂಲಕ ತಮ್ಮ ಹೊಣೆಗಾರಿಕೆಯನ್ನು ಮೆರೆದಿದ್ದ ತಗಡೂರು ಅವರನ್ನು ಗೌರವಿಸಲು ಇದು ನಮಗೆ ಸಿಕ್ಕ ಅವಕಾಶ ಎಂದರು.

ದೂರದರ್ಶನದ ಕಾರ್ಯಕ್ರಮ ಮುಖ್ಯಸ್ಥೆ ಎಚ್.ಎನ್.ಆರತಿ ಮಾತನಾಡಿ, ಹಿರಿಯ ಪತ್ರಕರ್ತರನ್ನು ಅವರ ಮನೆಯ ಅಂಗಳದಲ್ಲಿ ಅಭಿನಂದಿಸುವ ಕೆಲಸ ಮಾಡಿದ ತಗಡೂರು ಅವರಿಗೆ ಅಭಿನಂದನೆ ಹೇಳಿದರು.

ಕಾರ್ಯಕ್ರಮದ ಸಂಯೋಜಕ ಡಾ.ಎಸ್.ರಾಮಲಿಂಗೇಶ್ವರ (ಸಿಸಿರಾ) ಸ್ವಾಗತಿಸಿದರು.

ಭೂಮಿ ಫೌಂಡೇಶನ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಪತ್ರಿಕಾ ವಿತರಕರ ಸಂಘ, ರಂಗಸಿರಿ ಬಳಗ ಮತ್ತು ವಿವಿಧ ಘಟಕಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ಕೊನೆಯಲ್ಲಿ ವಿವಿಧ ಸಂಘ ಸಂಸ್ಥೆಗಳವರು ತಗಡೂರು ಅವರನ್ನು ಅಭಿನಂದಿಸಿದರು.

# ಡಿಸೆಂಬರ್ 23 ರಂದು ನಿವೃತ್ತ ನೌಕರರ ಕುಟುಂಬ ಪಿಂಚಣಿದಾರರ ಸಮಾವೇಶ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ವತಿಯಿಂದ ಡಿ.23 ರಂದು ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಮೈಸೂರು ವಿಭಾಗ ಮಟ್ಟದ ಪದಾಧಿಕಾರಿಗಳ ಮತ್ತು ನಿವೃತ್ತ ನೌಕರರ ಹಾಗೂ ಕುಟುಂಬ ಪಿಂಚಣಿದಾರರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಬೋರೇಗೌಡ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಸಮಾವೇಶವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಉದ್ಘಾಟಿಸಲಿದ್ದಾರೆ. ಸಂಘದ ಜಿಲ್ಲಾಧ್ಯಕ್ಷ ಎಸ್. ಬೋರೇಗೌಡ ಅಧ್ಯಕ್ಷತೆ ವಹಿಸುವರು, ಸಂಘದ ರಾಜ್ಯಾಧ್ಯಕ್ಷ ಡಾ.ಎಲ್. ಭೈರಪ್ಪ ಅವರು ಪ್ರಾಸ್ತಾವಿಕ ನುಡಿ ನುಡಿಯಲಿದ್ದು, ಸಂಸದ ಶ್ರೇಯಸ್ ಪಟೇಲ್, ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಸೇರಿದಂತೆ ಜಿಲ್ಲೆಯ ಎಲ್ಲಾ ಕ್ಷೇತ್ರದ ಶಾಸಕರು ಭಾಗಹಿಸಲಿದ್ದಾರೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ ಸ್ಥಾಪನೆಗೊಂಡು ಸುಮಾರು 65 ವರ್ಷ ಕಳೆದಿವೆ. ರಾಜ್ಯದಲ್ಲಿ ಸುಮಾರು 4 ಲಕ್ಷ 20 ಸಾವಿರ ನಿವೃತ್ತಿ ನೌಕರರು ಮತ್ತು 1 ಲಕ್ಷ ಕುಟುಂಬ ಪಿಂಚಣಿದಾರರಿದ್ದಾರೆ. ಇವರಿಗೆ ಪ್ರಮುಖವಾಗಿ ಆರೋಗ್ಯ ಕಾಪಾಡಿಕೊಳ್ಳುವುದು ಆದ್ಯ ಕರ್ತವ್ಯ.

ಆದ್ದರಿಂದ ನಗದು ರಹಿತ ಆರೋಗ್ಯ ಭಾಗ್ಯ, ಸಂಧ್ಯಾ ಕಿರಣ ಯೋಜನೆ ಅನುಷ್ಠಾನಗೊಳಿಸಬೇಕೆಂದು ಸರ್ಕಾರದ ಜೊತೆಯಲ್ಲಿ ಸಾಕಷ್ಟು ಚರ್ಚೆಯಾಗಿದೆ ಎಂದು ತಿಳಿಸಿದರು.

ಇದರ ಬಗ್ಗೆ ಸರ್ಕಾರ ಸಂಬಂಧಪಟ್ಟ ಆದೇಶ ಹೊರಡಿಸಿಲ್ಲ. ಆದ್ದರಿಂದ ಸರ್ಕಾರ ಜರೂರಾಗಿ ಸಂಧ್ಯಾ ಕಿರಣ ಯೋಜನೆ ಅನುಷ್ಠಾನ ಗೊಳಿಸಬೇಕೆಂದು ಸಮಾವೇಶದಲ್ಲಿ ಒತ್ತಾಯಿಸುವುದಾಗಿ ಹೇಳಿದರು.

7ನೇ ವೇತನ ಆಯೋಗವು ತನ್ನ ವರದಿಯಲ್ಲಿ ಸರ್ಕಾರಿ ನಿವೃತ್ತಿ ನೌಕರರಿಗೆ ಹಾಗೂ ಕುಟುಂಬ ಪಿಂಚಣಿದಾರರಿಗೆ 70 ವರ್ಷದಿಂದ 80 ವರ್ಷದೊಳಗೆ ವಯೋಮಿತಿ ಮೀರಿದವರಿಗೆ ಶೇ.10 ರಷ್ಟು ನಿವೃತ್ತಿ ವೇತನ ಮಂಜೂರು ಮಾಡಲು ಶಿಫಾರಸ್ಸು ಮಾಡಿದೆ. ಆದರೆ ಸರ್ಕಾರ ಇದುವರೆವಿಗೂ ಅನುಷ್ಠಾನ ಗೊಳಿಸಿಲ್ಲ. ಕೂಡಲೇ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರಿ ನಿವೃತ್ತಿ ನೌಕರರು ಹಾಗೂ ಕುಟುಂಬದ ಪಿಂಚಣಿದಾರರು ಮರಣ ಹೊಂದಿದ ಸಂದರ್ಭದಲ್ಲಿ ಅಂತಹ ಪ್ರಕರಣಗಳಿಗೆ ಅಂತಿಮ ವಿಧಿ ವಿಧಾನಗಳ ವೆಚ್ಚಗಳನ್ನು ನಿರ್ವಹಿಸುವುದಕ್ಕಾಗಿ ಈಗಾಗಲೇ ಸರ್ಕಾರಿ ನೌಕರರಿಗೆ ಸುಮಾರು ವರ್ಷಗಳಿಂದ 25 ಸಾವಿರ ನೀಡುತ್ತದೆ.

ಅದೇ ಮಾದರಿಯಲ್ಲಿ 7ನೇ ವೇತನ ಆಯೋಗವು ತನ್ನ ವರದಿಯಲ್ಲಿ ನಿವೃತ್ತ ನೌಕರರು ಹಾಗೂ ಕುಟುಂಬ ಪಿಂಚಣಿದಾರರು ಮರಣ ಹೊಂದಿದ ಸಂದರ್ಭದಲ್ಲಿ 10 ಸಾವಿರ ನೀಡಬೇಕೆಂದು ಸರ್ಕಾರಕ್ಕೆ ಒತ್ತಾಯಿಸ ಲಾಗುವುದು ಎಂದು ಹೇಳಿದರು.


ಸುದ್ದಿಗೋಷ್ಟಿಯಲ್ಲಿ ಸಂಘದ ಗೌರವಾಧ್ಯಕ್ಷ ಅನಂತರಾಮು, ಪುಟ್ಟಶೆಟ್ಟಿ, ಕಾಂತರಾಜು, ಶ್ರೀನಿವಾಸ, ಎಂ.ಆರ್.ತಿಪ್ಪರಾಜು ಮೊದಲಾದವರಿದ್ದರು.

# ಗೌರಮ್ಮನಿಗೆ ಎಳ್ಳು ಅಮಾವಾಸ್ಯೆ ಪೂಜೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಮಾಡಾಳು: ಗ್ರಾಮದ ಇತಿಹಾಸ ಪ್ರಸಿದ್ಧ ಪುಣ್ಯ ಕ್ಷೇತ್ರ ಮೂಲಸ್ಥಾನ ಶ್ರೀ ಸ್ವರ್ಣ ಗೌರಮ್ಮ ದೇವಿ ದೇವಾಲಯದಲ್ಲಿ ಎಳ್ಳು ಅಮಾವಾಸ್ಯೆ ಪೂಜೆಯ ನ್ನು ನೂರಾರು ಭಕ್ತರ ಸಮ್ಮುಖದಲ್ಲಿ ಶ್ರದ್ಧಾ ಭಕ್ತಿಯಿಂದ ಶುಕ್ರವಾರ ಸಂಜೆ ವಿಜೃಂಭಣೆಯಿಂದ ನೆರವೇರಿಸಲಾಯಿತು.

ಲೋಕ ಕಲ್ಯಾಣಾರ್ಥವಾಗಿ ಪ್ರತಿ ತಿಂಗಳ ಅಮಾವಾಸ್ಯೆಯಂದು ಮೂಗುತಿ ಸುಂದರಿ ಗೌರಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಗುವುದು. ಪೂಜೆಯ ಅಂಗವಾಗಿ ದೇವಾಲಯವನ್ನು ತಳಿರು ತೋರಣ ಬಾಳೆ ಕಂದುಗಳಿಂದ ಶೃಂಗರಿಸಿದ್ದರೆ, ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಿದ್ದು ನೋಡುಗರ ಕಣ್ಮನ ಸೆಳೆಯಿತು. ಮುಂಜಾನೆ ಧನುರ್ಮಾಸ ಹಾಗೂ ಅಮಾವಾಸ್ಯೆ ಪೂಜೆ ನಿಮಿತ್ತ ಗೌರಮ್ಮ ದೇವಿಗೆ ಕುಂಕುಮಾರ್ಚನೆ ಮಾಡಲಾಯಿತು.



ಸುಕ್ಷೇತ್ರ ಹಾರನಹಳ್ಳಿ ಕೋಡಿಮಠ ಮಹಾ ತಪಸ್ವಿ ಲಿಂಗೈಕ್ಯ ಶಿವಲಿಂಗಜ್ಜಯ್ಯ ಮೂರ್ತಿಗೆ ಮತ್ತು ಗ್ರಾಮದ ಆರಾಧ್ಯದೈವ ಶ್ರೀ ಗುರು ಚನ್ನಬಸವೇಶ್ವರ ಸ್ವಾಮಿಗೆ ರುದ್ರಾಭಿಷೇಕ ಸಹಸ್ರ ಬಿಲ್ವಾರ್ಚನೆ ಪುರೋಹಿತರಿಂದ ಧಾರ್ಮಿಕ ವಿಧಿ ವಿಧಾನಗಳಿಂದ ಭಕ್ತರ ಸಮ್ಮುಖದಲ್ಲಿ ಪೂಜೆ ನೆರವೇರಿಸಲಾಯಿತು. ರಾತ್ರಿ 8 ಗಂಟೆಗೆ ಸರಿಯಾಗಿ ಮಹಾ ಮಂಗಳಾರತಿ ಕರ್ಪೂರದಾರತಿ ಸಲ್ಲಿಸಲಾಯಿತು. ನಂತರ ಬಂದ ಭಕ್ತಾದಿಗಳಿಗೆ ಎಂಪಿ ಶಿವಲಿಂಗಪ್ಪ ಮತ್ತು ಕುಟುಂಬ ವರ್ಗದಿಂದ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿತ್ತು.

ಮಾಡಾಳು ಸೇರಿದಂತೆ ಕೊಪ್ಪಲು, ಸೀತಾಪುರ, ಯರೇಹಳ್ಳಿ, ವೈಜಿಹಳ್ಳಿ, ಡಿ.ಎಂ ಕುರ್ಕೆ, ಶಶಿವಾಳ, ರಾಂಪುರ, ಸೊಪ್ಪಿನಹಳ್ಳಿ, ಪಿ.ಹೊಸಹಳ್ಳಿ, ಕಿತ್ತನಕೆರೆ, ದೋಣನಕಟ್ಟೆ, ಶಂಕರನಹಳ್ಳಿ, ಮದ್ದರಹಳ್ಳಿ, ಕಡಲಮಗೆ ಮೊದಲಾದ ಗ್ರಾಮಗಳಿಂದ ಭಕ್ತಾದಿಗಳು ಆಗಮಿಸಿ ದೇವಿ ದರ್ಶನ ಪಡೆದು ಪುನೀತರಾದರು.

# ಅಂತರ ರಾಜ್ಯ ಕಳ್ಳನ ಬಂಧನ

## 80 ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಬೇಕಾಗಿದ್ದ ಕುಖ್ಯಾತ ಖದೀಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಬರೋಬ್ಬರಿ 80ಕ್ಕೂ ಹೆಚ್ಚು ಅಪರಾಧ ಪ್ರಕರಣಗಳಲ್ಲಿ ರಾಜ್ಯ ಹಾಗೂ ನೆರೆಯ ರಾಜ್ಯದ ಪೊಲೀಸರಿಗೆ ಬೇಕಾಗಿದ್ದ ಕುಖ್ಯಾತ ಅಂತರರಾಜ್ಯ ಮನೆ ಕಳ್ಳನನ್ನು ನಗರದ ಪೆನ್ಶನ್ ಮೊಹಲ್ಲಾ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬೆಂಗಳೂರಿನ ಗೆದ್ದಲಹಳ್ಳಿಯ ಸೋಹಿಲ್ ಖಾನ್ ಅಲಿಯಾಸ್ ಸಮೀರ್ ಖಾನ್(38) ಬಂಧಿತ ಆರೋಪಿ. ಈತ ಸಾಮಾನ್ಯ ಕಳ್ಳನಲ್ಲ. ನಗರದ ಪೆನ್ಶನ್ ಮೊಹಲ್ಲಾ ಠಾಣಾ ವ್ಯಾಪ್ತಿಯಲ್ಲಿ 3, ರಾಜ್ಯದಲ್ಲಿ ಒಟ್ಟು 27 ಪ್ರಕರಣ, ಆಂಧ್ರ ಪ್ರದೇಶ ರಾಜ್ಯದಲ್ಲಿ ಒಟ್ಟು 52, ಉಡುಪಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ತಲಾ 1 ಪ್ರಕರಣಗಳಲ್ಲಿ ಭಾಗಿಯಾಗಿದ್ದ. ಈ ನಡುವೆ ಉಡುಪಿ ಪ್ರಕರಣದಲ್ಲಿ ಶಿಕ್ಷೆ



ಆಗಿದ್ದರೆ, ಬೀದರ್ ಮೊಕದ್ದಮೆಯಲ್ಲಿ ಪ್ರಕರಣ ವಜಾ ಆಗಿದೆ. ಈತನಿಂದ ಒಟ್ಟು 250 ಗ್ರಾಂ ತೂಕವುಳ್ಳ ಚಿನ್ನಾಭರಣವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

### ಪತ್ತೆಯಾಗಿದ್ದು ಹೇಗೆ

ದೂರುದಾರರಾದ ಶಾಂತಿನಗರದ ಪ್ರೇಮಾ ಕಳೆದ ಸೆ.15 ರಂದು ಬೆಳಿಗ್ಗೆ ಮನೆಯ ಬಾಗಿಲು ಲಾಕ್ ಮಾಡಿಕೊಂಡು ಮನೆಗೆ ಸಾಮಾನು ತರಲು 9ನೇ ಕ್ರಾಸ್ ನಲ್ಲಿರುವ ಸ್ನೇಹಿತೆ ಮನೆಗೆ ಹೋಗಿ ಮಾತನಾಡಿಕೊಂಡು ಮುಕ್ಕಾಲು ಗಂಟೆ ಬಿಟ್ಟು ಮನೆಗೆ ವಾಪಸ್ ಬಂದರು.

ಅದೇ ವೇಳೆ ಮನೆಯೊಳಗಿನಿಂದ ಸುಮಾರು 30-35 ವರ್ಷದ ಗಂಡಸು ಬಂದ. ಯಾರು ಎಂದು ಕೇಳಿದ್ದಕ್ಕೆ ನಿಮ್ಮ ಹುಡುಗ ಒಳಗಿದ್ದಾನೆ ಎಂದು ಹೇಳಿ ಕ್ಷಣಾರ್ಧದಲ್ಲಿ ಮನೆ ಮುಂದೆ ನಿಲ್ಲಿಸಿದ್ದ ಬೈಕ್ ಏರಿ ಪರಾರಿಯಾಗಿದ್ದ. ಪ್ರೇಮಾ ಬಾಗಿಲ ಬಳಿ ಹೋಗಿ, ತಿರುಗು ನೋಡುವಷ್ಟರಲ್ಲಿ ಆಸಾಮಿ ಇರಲಿಲ್ಲ.

ಒಳಗೆ ಹೋಗಿ ನೋಡಿದಾಗ ರೂಂ.ನಲ್ಲಿದ್ದ ಬೀರುವಿನ ಬಾಗಿಲಿನ ಲಾಕರ್ ಮುರಿದು ಅದರಲ್ಲಿಟ್ಟಿದ್ದ ಸುಮಾರು 134 ಗ್ರಾಂ. ತೂಕವುಳ್ಳ 55 ಗ್ರಾಂ.ತೂಕದ ಚಿನ್ನದ ಮಾಂಗಲ್ಯ ಸರ, 48 ಗ್ರಾಂ.ತೂಕದ ಚೈನ್ದ ಹಾರ, 18 ಗ್ರಾಂ ತೂಕದ ಓಲೆ ಹ್ಯಾಂಗಿಗ್ಸ್, 3 ಗ್ರಾಂ ತೂಕದ ಚಿನ್ನದ ಓಲೆಗಳು, 5 ಗ್ರಾಂ ತೂಕದ ಒಂದು ಚಿನ್ನದ ಉಂಗುರ, 3 ಗ್ರಾಂ ತೂಕದ ಚಿನ್ನದ ಉಂಗುರ, 2 ಗ್ರಾಂ ತೂಕದ ಚೈನ್ದ ಮಕ್ಕಳ ಉಂಗುರ ಸೇರಿ ಒಟ್ಟು 8,04,000 ರೂ.ಮೌಲ್ಯದ ಆಭರಣ ಕದ್ದು ಕಳ್ಳ ಪರಾರಿಯಾಗಿದ್ದ. ಈ ಸಂಬಂಧ ಪ್ರಕರಣ ದಾಖಲಿಸಿ ಪೊಲೀಸರು ತನಿಖೆ ಕೈಗೊಂಡಿದ್ದರು. ಇದಕ್ಕಾಗಿ ವಿಶೇಷ ತಂಡ ರಚಿಸಲಾಗಿತ್ತು, ಕಡೆಗೂ ಅಂತರ ರಾಜ್ಯ ಕಳ್ಳರನ್ನು ಪೊಲೀಸರು ಬಂಧಿಸಿದ್ದು, ಆರೋಪಿಯನ್ನು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ.

# ಡಿ.24 ರಿಂದ 2 ದಿನ ಕ್ರಿಸ್‌ಮಸ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅರಸೀಕೆರೆ ತಾಲೂಕು ಅಣ್ಣನಾಯ್ಕನಹಳ್ಳಿ ಕೆಳಗಲಹಟ್ಟಿ ಗ್ರಾಮದಲ್ಲಿ ಡಿ.24 ಮತ್ತು 25 ರಂದು ಕ್ರಿಸ್‌ಮಸ್ ಹಬ್ಬವನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಚರ್ಚ್‌ನ ಧರ್ಮಗುರು ರಾಜು ಭೋವಿ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಚರ್ಚ್‌ನಲ್ಲಿ ಪ್ರತಿ ವರ್ಷ ಕೂಡ ಕ್ರಿಸ್ ಹಬ್ಬವನ್ನು ಅದ್ದೂರಿಯಾಗಿ ಆಚರಿಸಿ ಜನರಿಗೆ ಕ್ರಿಸ್‌ಮಸ್ ಶುಭ ಸಂದೇಶ ಸಾರಲಾಗುವುದು ಎಂದರು.

ಅದರಂತೆ ಈ ಬಾರಿಯೂ ಡಿ.24. ಮತ್ತು 25 ರಂದು ಎರಡು ದಿನಗಳ ಕಾಲ ಅದ್ದೂರಿಯಾಗಿ ಕ್ರಿಸ್‌ಮಸ್ ಆಚರಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮಕ್ಕೆ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಗೃಹಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಎಲ್ಲರೂ ಭಾಗವಹಿಸಿ ಕ್ರಿಸ್‌ಮಸ್ ಹಬ್ಬಕ್ಕೆ ಮತ್ತಷ್ಟು ಮೆರುಗು ನೀಡುವಂತೆ ಅವರು ಮನವಿ ಮಾಡಿದರು.




ಚರ್ಚ್ ಉಪಾಧ್ಯಕ್ಷ ರಾಜ ಭೋವಿ, ಖಜಾಂಚಿ ಅಬ್ಬಾಯಪ್ಪ, ಖಜಾಂಚಿ ರವಿಭೋವಿ, ಸಿದ್ದೇಶ್, ವೆಂಕಟೇಶ ಇದ್ದರು.



ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಇಂದು ತಮ್ಮ ಕಚೇರಿಯಲ್ಲಿ ಜಿಲ್ಲಾಮಟ್ಟದ ಜನಸ್ಪಂದನಾ ಕಾರ್ಯಕ್ರಮ ನಡೆಸಿದರು. ಮಹಿಳೆಯರು, ಪುರುಷರು, ರೈತರು ಸೇರಿದಂತೆ ವಿವಿಧ ಕ್ಷೇತ್ರಗಳ ಜನರು ಸಾಲ ಸಾಲಾಗಿ ಆಗಮಿಸಿ ತಮ್ಮ ತಮ್ಮ ಸಮಸ್ಯೆ, ದೂರು-ದುಮ್ಮಾನ ಹೇಳಿಕೊಂಡರು. ಕೆಲವನ್ನು ಸ್ಥಳದಲ್ಲೇ ಬಗೆಹರಿಸಿದ ಡಿಸಿ ಅವರು, ಉಳಿದವುಗಳನ್ನು ಇಂತಿಷ್ಟು ಕಾಲಮಿತಿಯೊಳಗೆ ಬಗೆಹರಿಸಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

# ಹೃದಯಾಘಾತ: ಇಬ್ಬರು ಸಾವು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಹಠಾತ್ ಹೃದಯಾಘಾತಕ್ಕೆ ಶಿಕ್ಷಕಿ ಸೇರಿ ಇಬ್ಬರು ಬಲಿಯಾಗಿದ್ದಾರೆ.

ಮೃತರನ್ನು ಅರಕಲಗೂಡು ತಾಲೂಕಿನ ದೊಡ್ಡಳ್ಳಿ ಗ್ರಾಮದ ಸುಧಾಮಣಿ (58) ಹಾಗೂ ಹೊಳೆನರಸೀಪುರ ಹೋಬಳಿ ಹಳ್ಳಿ ಮೈಸೂರು ಹೋಬಳಿ ಗುಲಗಂಜಿಹಳ್ಳಿ ಗ್ರಾಮದ ಯುವಕ ಪರಮೇಶ್(35) ಎಂದು ಗುರುತಿಸಲಾಗಿದೆ.

ಸುಧಾಮಣಿ ಅವರು ಅದೇ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಶಿಕ್ಷಕಿಯಾಗಿದ್ದರು. ಅವರು ನಿವೃತ್ತಿಯಾಗಲು ಇನ್ನೆರಡು ವರ್ಷವಷ್ಟೇ ಬಾಕಿಯಿತ್ತು. ಇಂದು ಮುಂಜಾನೆ ಮನೆಯಲ್ಲಿ ಮಲಗಿದ್ದ ವೇಳೆ ಹಠಾತ್ ಹೃದಯಾಘಾತ ಸಂಭವಿಸಿ ಅಲ್ಲೇ ಕೊನೆಯುಸಿರೆಳೆದಿದ್ದಾಳೆ.

ಹೊಳೆನರಸೀಪುರ ಪಟ್ಟಣದ ಹೋಟೆಲ್‌ಮೊಂದರಲ್ಲಿ ಕೆಲಸ ಮಾಡುತ್ತಿದ್ದ ಪರಮೇಶ್, ಮಧ್ಯರಾತ್ರಿ 2 ಗಂಟೆ ಸಮಯದಲ್ಲಿ ಮಲಗಿದಲ್ಲಿಯೇ ಹಠಾತ್ ಹೃದಯಾಘಾತವಾಗಿ ಸಾವನ್ನಪ್ಪಿದ್ದಾರೆ. ಹಾಸನ ಜಿಲ್ಲೆಯಲ್ಲಿ ಹಲವು ತಿಂಗಳ ನಂತರ ಮತ್ತೆ ಹೃದಯಾಘಾತ ಪ್ರಕರಣ ಮರುಕಳಿಸಿರುವುದು ಸಹಜವಾಗಿಯೇ ಆತಂಕ ಮೂಡಿಸಿದೆ.

# ವ್ಯವಹಾರ ಜ್ಞಾನದಿಂದ ಬದುಕು ಸದೃಢ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ವ್ಯವಹಾರಿಕ ಜ್ಞಾನ ಬೆಳಸಿಕೊಳ್ಳದಿದ್ದರೆ ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಲು ಸಾಧ್ಯವಿಲ್ಲ ಎಂದು ಎಸ್ಡಿಎಂಸಿ ಅಧ್ಯಕ್ಷ ಮಂಜುನಾಥ್ ಮೌರ್ಯ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಪಿಎಂಶ್ರೀ ಶಾಸಕರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಆಯೋಜಿಸಿದ್ದ ಮಕ್ಕಳ ಸಂತೆ ಕಾರ್ಯಕ್ರಮದಲ್ಲಿ ಮಾತನಾಡಿ, ಶಿಕ್ಷಣ ಬದುಕಿನ ಮೆಟ್ಟಿಲು ಎಂದರು.

ಲೆಕ್ಕಾಚಾರ ಸರಿಯಿಲ್ಲದಿದ್ದರೆ ವ್ಯವಹಾರ ಹಾಳಾಗಲಿದೆ. ಕೂಡುವುದು, ಕಳೆಯುವುದು ಹಾಗೂ ಗುಣಿಸುವ ಮೂಲ ತಿಳಿಯದೆ ಯಾವುದೇ ವ್ಯವಹಾರದಲ್ಲಿ ಲಾಭ ಪಡೆಯುವುದಿರಲಿ ಹಾಕಿರುವ ಬಂಡವಾಳ ಸರಿದೂಗಿಸಿಕೊಳ್ಳಲು ಸಾಧ್ಯವಾಗದೆ ಆರ್ಥಿಕವಾಗಿ ಹಿನ್ನಡೆಯಾಗಲಿದೆ ಎಂದು ತಿಳಿಸಿದರು. ಮಕ್ಕಳ ಸಂತೆಯಲ್ಲಿ ಹಣ್ಣು-ತರಕಾರಿಗಳು, ಸೊಪ್ಪು, ಜ್ಯೂಸ್, ಐಸ್ ಕ್ರೀಮ್, ಪಾನಿ ಪುರಿ, ಗೋಬಿ, ಕಾಫಿ, ಟೀ ಮತ್ತು ಬಾದಾಮಿ ಹಾಲು, ಸ್ಲಿಪ್ಪರ್, ಮನೆ ಬಳಕೆ ವಸ್ತುಗಳು ಹಾಗೂ ಉತ್ತರ ಕರ್ನಾಟಕ ಶೈಲಿಯ ಉಪಹಾರ ಹಾಗೂ ಊಟ ಸೇರಿದಂತೆ ವಿವಿಧ ವ್ಯಾಪಾರಗಳಲ್ಲಿ ವಿದ್ಯಾರ್ಥಿಗಳು ಉತ್ಸುಕರಾಗಿ ಪಾಲ್ಗೊಂಡಿದ್ದು ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವ್ಯಾಪಾರ ಮಾಡುವ ಮೂಲಕ ಮಕ್ಕಳಿಗೆ ಪ್ರೋತ್ಸಾಹ ನೀಡಿದ್ದು ವಿಶೇಷವಾಗಿತ್ತು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಪರಮೇಶ್, ಮುಖ್ಯಶಿಕ್ಷಕಿ ಹೆಚ್.ಬಿ.ಉಮಾ, ಸಹ ಶಿಕ್ಷಕರಾದ ಧರ್ಮೇಶ್.ಎಲ್.ಎಸ್, ಯೋಗೇಶ್, ದೇವಕಿ, ಶೋಭಾ,ವಿನಯ ಎಂ.ಗುನಗ, ಗೌರಮ್ಮ, ಆರ್.ಶೋಭ, ಶ್ವೇತ, ವರಲಕ್ಷ್ಮೀ, ಪಾಲಕರು ಹಾಗೂ ಇತರರು ಇದ್ದರು.

# ರೆಡ್ ಕ್ರಾಸ್ ಸಂಸ್ಥೆಯ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಹಾಸನ, ಕುವೆಂಪು ಇಂಟರ್ ನ್ಯಾಷನಲ್ ಸ್ಕೂಲ್ ಹಾಸನ, ಕುವೆಂಪು ಪದವಿ ಪೂರ್ವ ಕಾಲೇಜು ಹಾಸನ ಹಾಗೂ ಕಿರಿಯ ರೆಡ್ ಕ್ರಾಸ್ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮಣಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮಕ್ಕಳ ವೈದ್ಯರಾದ ಡಾ.ದಿನೇಶ್ ಭೈರೇಗೌಡ ರವರು ಮಾತನಾಡಿ ವಿದ್ಯಾರ್ಥಿಗಳಲ್ಲಿ ಅತಿಹೆಚ್ಚು ಮೊಬೈಲ್ ಬಳಕೆಯಿಂದ ಆರೋಗ್ಯ ತೊಂದರೆ ಉಂಟಾಗುತ್ತಿದೆ ಹಾಗೂ ಆರೋಗ್ಯ ಎಂದರೆ ದೈಹಿಕ, ಮಾನಸಿಕ, ಸಮಾಜಿಕವಾಗಿ ದೃಢತೆ ಹೊಂದಿರುವುದು ಎಂಧರ್ಥ, ಹೀಗಾಗಿ ಮಕ್ಕಳು ದೈಹಿಕವಾಗಿ ಧೃಡವಾಗಿರಲು ಕ್ರೀಡಾಚಟುವಟಿಕೆಗಳಲ್ಲಿ ಭಾಗವಹಿಸಬೇಕು ಮತ್ತು ಪೌಷ್ಠಿಕ ಆಹಾರ ಸೇವನೆ ಮಾಡಬೇಕು ಎಂದರು. ನಂತರ ಮಾತನಾಡಿದ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿಗಳಾದ ಶ್ರೀ ಹೆಚ್.ಪಿ. ಮೋಹನ್ ರವರು ವಿದ್ಯಾರ್ಥಿಗಳು ಉನ್ನತ ಮಟ್ಟದಲ್ಲಿ ಸಾಧನೆ ಮಾಡಲು ಆರೋಗ್ಯ ಸುಧಾರಣೆ ಅತ್ಯವಶ್ಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕುವೆಂಪು ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಿ.ಈ. ಶಿವರಾಮೇಗೌಡ ವಹಿಸಿದ್ದರು ಹಾಗೂ ವಿದ್ಯಾರ್ಥಿಗಳು ಮತ್ತು ಪೋಷಕರು ಆರೋಗ್ಯ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.




ಶಿಬಿರದಲ್ಲಿ ಎನ್.ಸಿ.ಡಿ ತಂಡದ ವತಿಯಿಂದ ರಕ್ತದೊತ್ತಡ (ಬಿ.ಪಿ) ಹಾಗೂ ಶುಗರ್ ತಪಾಸಣೆ, ಡಾ. ಮಿಥಿಲಿ ರಮೇಶ್ ರವರಿಂದ ಸಾಮಾನ್ಯ ವೈದ್ಯಕೀಯ ತಪಾಸಣೆ, ಡಾಕ್ಟರ್ ಅಗರ್ವಾಲ್ ಕಣ್ಣಿನ ಆಸ್ಪತ್ರೆಯ ವತಿಯಿಂದ ನೇತ್ರ ತಪಾಸಣೆ, ವಿ-ಕೇರ್ ಆಸ್ಪತ್ರೆಯ ವತಿಯಿಂದ ದಂತ ತಪಾಸಣೆ ಹಾಗೂ ಹಾಸನ ರಕ್ತ ನಿಧಿ ಕೇಂದ್ರದ ವತಿಯಿಂದ ಹಿಮೋಗ್ಲೋಬಿನ್ ಮತ್ತು ರಕ್ತ ಗುಂಪು ತಪಾಸಣೆ ನಡೆಸಲಾಯಿತು.

ಈ ಶಿಬಿರದ ಸಂದರ್ಭದಲ್ಲಿ ಒಟ್ಟು 07 ಜನರು ನೇತ್ರದಾನಕ್ಕೆ ನೊಂದಣಿ ಮಾಡಿಕೊಂಡರು. ಶಿಬಿರದಲ್ಲಿ ಒಟ್ಟು 300ಜನ ವಿದ್ಯಾರ್ಥಿಗಳು ಹಾಗೂ ಪೋಷಕರು ಭಾಗವಹಿಸಿ ಆರೋಗ್ಯ ತಪಾಸಣೆಯ ಸದುಪಯೋಗವನ್ನು ಪಡೆದರು.

ಈ ಕಾರ್ಯಕ್ರಮದಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಶ್ರೀ ಹೆಚ್.ಡಿ. ಕುಮಾರ್, ಶಬ್ಬೀರ್ ಅಹ್ಮದ್, ಜಯೇಂದ್ರಕುಮಾರ್, ಭೀಮರಾಜ್, ಕೃಷ್ಣಅಯ್ಯಂಗಾರ್, ಸಂಯೋಜಕರಾದ ಅವಿನಾಶ್ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಜೋಸೆಫ್ ಮತ್ತು ಇತರರು ಉಪಸ್ಥಿತರಿದ್ದರು.

# ಡಿ.23 ರಂದು ವಿದ್ಯುತ್ ವ್ಯತ್ಯಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ : ಹೊಳೆನರಸೀಪುರ ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ.ವಿ.ವಿ ಕೇಂದ್ರ. ಬಂಡಿಶೆಟ್ಟಿಹಳ್ಳಿ ಇಲ್ಲಿ ಡಿ.23 ರಂದು 3ನೇ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ನಿರ್ವಹಿಸಬೇಕಾಗಿರುವುದರಿಂದ, ಬಂಡಿಶೆಟ್ಟಿಹಳ್ಳಿ (ಕಾಪಾ) ಶಾಖಾ ವ್ಯಾಪ್ತಿಯ ಗ್ರಾಮಗಳಾದ ಜೋಡಿಗುಬ್ಬಿ, ಮುದ್ದನಹಳ್ಳಿ, ಕೆರಗೋಡು, ಉದ್ದೂರು ಹೊಸಹಳ್ಳಿ, ಓಡನಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ಸದರಿ ದಿನಾಂಕದಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ

ಎಂದು ಕವಿಪ್ರನಿನಿ, ಹೊಳೆನರಸೀಪುರ ನೋಡಲ್ ಕೇಂದ್ರದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248